**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.331/2021**

ಪಿ.ಡಬ್ಲ್ಯೂ: 7

ಸಿ.ಡಬ್ಲ್ಯೂ: 5

ಸಾಕ್ಷಿದಾರರ ಹೆಸರು : ರೇಖ್ಯಾಯನಾಯ್ಕ

ತಂದೆಯ ಹೆಸರು: : ಲಾಲ್ಯಾನಾಯ್ಕ

ವಯಸ್ಸು : **52 ವರ್ಷ**

ಉದ್ಯೋಗ : ಕೂಲಿ ಕೆಲಸ

ವಾಸಸ್ಥಳ : ಕೃಷ್ಣಾಪುರ ಗ್ರಾಮ

**ದಿನಾಂಕ: 02-02-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು ನಾಲ್ಕು ವರ್ಷಗಳ ಹಿಂದೆ ನಾನು ಕೆಂಚಾಪುರ ಗ್ರಾಮದಲ್ಲಿ ಪೊಲೀಸರ ಕೋರಿಕೆಯ ಮೇರೆಗೆ ಒಂದು ದಾಖಲಾತಿಗೆ ಸಹಿ ಮಾಡಿದ್ದು, ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಪೊಲೀಸರು ಯಾವುದೇ ವಾಹನವನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ನಂತರ ನಾನು ತರೀಕೆರೆ ಸರ್ಕಾರಿ ಆಸ್ಪತ್ರೆಯಲ್ಲಿ ಪೊಲೀಸರ ಕೋರಿಕೆಯ ಮೇರೆಗೆ ಒಂದು ದಾಖಲಾತಿಗೆ ಸಹಿ ಮಾಡಿರುತ್ತೇನೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ವಾಹನ ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-10 ಎಂದು, ಸಾಕ್ಷಿಯ ಸಹಿಯನ್ನು ನಿಪಿ-10(ಸಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ-11 ರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು:** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕ: **23-03-2020** ರಂದು ಮಧ್ಯಾಹ್ನ **3-15** ರಿಂದ **4-15** ರವರೆಗೆ ತರೀಕೆರೆ ತಾಲ್ಲೂಕು ಪೊಲೀಸ್ ಠಾಣಾ ಆವರಣದಲ್ಲಿ ಅಪಘಾತವುಂಟು ಮಾಡಿದ ಲಾರಿಯನ್ನು ಪೊಲೀಸರು ಅಮಾನತ್ತು ಮಹಜರ್ ಕ್ರಮ ಜರುಗಿಸಿದ್ದು, ಸದರಿ ಮಹಜರ್ ಗೆ ನೀವು ಸಹಿ ಮಾಡಿರುತ್ತಿರಾ ಎಂದರೆ ಸರಿ. ಸಾಕ್ಷಿ ಆದರೆ ವಿಚಾರ ತಿಳಿದಿರುವುದಿಲ್ಲ ಎಂದು ನುಡಿದಿರುತ್ತಾರೆ. ಆ ಸಮಯದಲ್ಲಿ ನಿಮ್ಮ ಸಮಕ್ಷಮದಲ್ಲಿ

ಕೆಎ 52 7841 ಹಳದಿ ಮತ್ತು ನೀಲಿ ಬಣ್ಣದ ಲಾರಿಯನ್ನು ಅಪಘಾತದ ವಿಚಾರವಾಗಿ ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸಾಕ್ಷಿ ನಾನು ಸಹಿ ಹಾಕಿದ್ದು, ಛಾಯಚಿತ್ರವನ್ನು ತೆಗೆಸಿರುತ್ತಾರೆ, ಅಪಘಾತದ ವಿಚಾರವಾಗಿ ಎಂದು ನನಗೆ ತಿಳಿಸಿರುತ್ತಾರೆಂದು ನುಡಿದಿರುತ್ತಾರೆ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ.**

ಪಾಟೀ ಸವಾಲು ಇಲ್ಲ

**ಮರುವಿಚಾರಣೆ:** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

ಸಹಿ/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**